# ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ.,

ಶಾಸನಬದ್ಧ ಸಹಕಾರಿ ಸಂಸ್ಥೆ

"ಸೌಹಾರ್ದ ಸಹಕಾರಿ ಸೌಧ", ನಂ.68, ಒಂದನೇ ಮಹಡಿ, 17 & 18ನೇ ಅಡ್ಡರಸ್ತೆ ಮಧ್ಯೆ, ಮಾರ್ಗೋಸಾ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-560055. ದೂ. 080-23378375-80,
ಇ-ಮೇಲ್ : Souharda@souharda.coop ವೆಬ್ ತಾಣ : www.Souharda.coop

ಸಂಖ್ಯೆ: ಸಂ.ಸ/ಸಿಬ್ಬಂದಿ/ಗುನೇ/06-1/2024-25 ದಿನಾಂಕ:29.08.2024

## "ಪರಿಷ್ಕೃತ ಅಧಿಸೂಚನೆ"

**(ತಿದ್ದುಪಡಿ ಅಧಿಸೂಚನೆ ಸಂಖ್ಯೆ: ಸಂ.ಸ/ಸಿಬ್ಬಂದಿ/ತಿದ್ದಪಡಿ.ಅ.ಗು..ನೇಮಕಾತಿ/05/2024-25 ದಿನಾಂಕ:29.08.2024)**

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ, ಬೆಂಗಳೂರು ಇದರಲ್ಲಿ ಖಾಲಿ ಇರುವ ವಿವಿಧ ವೃಂದಗಳಲ್ಲಿನ ಹುದ್ದೆಗಳ ಗುತ್ತಿಗೆ ಆಧಾರದಲ್ಲಿ ತಾತ್ಕಾಲಿಕ ನೇಮಕಾತಿಯನ್ನು ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ರಾಜ್ಯ ಸೌಹಾರ್ದ ಸಹಕಾರಿ ಅಧಿನಿಯಮ-1997 ಮತ್ತು ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ ಇದರ ಉಪವಿಧಿ ಹಾಗೂ ಸಿಬ್ಬಂದಿ ಸೇವಾನಿಯಮಾವಳಿಯ ನೇಮಕಾತಿ ನಿಯಮ ಹಾಗೂ ಆಡಳಿತ ಮಂಡಳಿ ಮತ್ತು ಸಿಬ್ಬಂದಿ ನೇಮಕಾತಿ ವಿಷಯಗಳ ಸಮಿತಿಯ ನಿರ್ಣಯದಂತೆ ನೇಮಕ ಮಾಡಲು ಕೋರಿಯರ್/ರಿಜಿಸ್ಟರ್ಡ್ ಪೋಸ್ಟ್/ಖುದ್ದಾಗಿ ಕಛೇರಿಗೆ ತಲುಪಿಸುವ ಮೂಲಕ ಅರ್ಹ ಅಭ್ಯರ್ಥಿಗಳಿಂದ ದಿನಾಂಕ:26.06.2024ರಂದು ಪತ್ರಿಕಾ ಪ್ರಕಟನೆ ಮೂಲಕ ನೇಮಕಾತಿ ಅರ್ಜಿಗಳು ಆಹ್ವಾನಿಸಲಾಗಿತ್ತು. ಪ್ರಸ್ತುತ ಆಡಳಿತ ಮಂಡಳಿಯ ಸಭೆಯ ನಿರ್ಣಯದಂತೆ ನೇಮಕಾತಿ ನಿಬಂಧನೆಗಳಲ್ಲಿ ವಯೋಮಿತಿ, ಅನುಭವದ ಕುರಿತಂತೆ ಪರಿಷ್ಕರಿಸಲಾಗಿದೆ. ದಿನಾಂಕ24.05.2024 ನೇಮಕಾತಿ ಸಮಿತಿಯು ಅನುಮೋದಿಸಿದಂತೆ ಗುತ್ತಿಗೆ ಆಧಾರದ ನೇಮಕಾತಿಗೆ ಪರಿಗಣಿಸಲಾದ ಹುದ್ದೆಗಳು ಮತ್ತು ವಿದ್ಯಾರ್ಹತೆ ವಿವರ.

| ಕ್ರ.ಸಂ | ಹುದ್ದೆಗಳ ಹೆಸರು | ಹುದ್ದೆಗಳ ಸಂಖ್ಯೆ | ವಿದ್ಯಾರ್ಹತೆ & ಅನುಭವ |
|---|---|---|---|
| 1 | ಸನ್ನದು ಲೆಕ್ಕಪರಿಶೋಧಕರು | 1 | ಮಾನ್ಯತೆ ಪಡೆದ ಪ್ರಾಧಿಕಾರದಿಂದ ಸಿಎ/ಸಿಎಸ್/ಐಸಿಡಬ್ಲ್ಯುಎ ಪ್ರಮಾಣಿಕರಣ ಹೊಂದಿರುವುದು, ಅನುಭವ ಹೊಂದಿರುವವರಗೆ ಆದ್ಯತೆ. ಸದರಿ ಹುದ್ದೆಗೆ ಗರಿಷ್ಠ ವಯೋಮಿತಿ 35 ವರ್ಷಗಳು |
| 2 | ಕಾನೂನು ಅಧಿಕಾರಿ (ಅಧಿಕಾರಿ ಶ್ರೇಣಿ) | 2 | ಅಂಗೀಕೃತ ವಿಶ್ವವಿದ್ಯಾಲಯದಿಂದ ಕಾನೂನು ಪದವಿ ಕಡ್ಡಾಯ. ಕಂಪ್ಯೂಟರ್ ಪರಿಣಿತಿ ಕಡ್ಡಾಯ. ಬ್ಯಾಂಕಿಂಗ್ ಅಥವಾ ಸಹಕಾರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅನುಭವ ಹೊಂದಿದವರಿಗೆ ಆದ್ಯತೆ. ಸದರಿ ಹುದ್ದೆಗೆ ಗರಿಷ್ಠ ವಯೋಮಿತಿ 35 ವರ್ಷಗಳು |
| 3 | ಮಾನವ ಸಂಪನ್ಮೂಲ ಅಧಿಕಾರಿ (ಅಧಿಕಾರಿ ಶ್ರೇಣಿ) | 1 | ಅಂಗೀಕೃತ ವಿಶ್ವವಿದ್ಯಾಲಯದಿಂದ ಎಂ.ಬಿ.ಎ, ಹೆಚ್.ಆರ್ ಪದವಿ. ಕಂಪ್ಯೂಟರ್ ಪರಿಣಿತಿ ಕಡ್ಡಾಯ. ಕಾರ್ಪೋರೇಟ್ ಕಂಪನಿ ಅಥವಾ ಹೆಚ್.ಆರ್ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸಿ ಅನುಭವ ಹೊಂದಿದವರಿಗೆ ಆದ್ಯತೆ. ಸದರಿ ಹುದ್ದೆಗೆ ಗರಿಷ್ಠ ವಯೋಮಿತಿ 35 ವರ್ಷಗಳು. |
| 4 | ತರಬೇತಿ ಅಧಿಕಾರಿ (ಅಧಿಕಾರಿ ಶ್ರೇಣಿ) | 1 | ಅಂಗೀಕೃತ ವಿಶ್ವವಿದ್ಯಾಲಯದಿಂದ ಎಂ.ಎ, ಕನ್ನಡ ಅಥವಾ ಎಂಎಸ್‌ಡಬ್ಲ್ಯೂ ಪದವಿ. ಕಂಪ್ಯೂಟರ್ ಪರಿಣಿತಿ ಕಡ್ಡಾಯ. ಬೋಧಕರಾಗಿ ಮೂರು ವರ್ಷಗಳ ಅನುಭವ ಹೊಂದಿದವರಿಗೆ ಆದ್ಯತೆ. ಸದರಿ ಹುದ್ದೆಗೆ ಗರಿಷ್ಠ ವಯೋಮಿತಿ 35 ವರ್ಷಗಳು. |
| 5 | ಸೌಹಾರ್ದ ಅಭಿವೃದ್ಧಿ ಅಧಿಕಾರಿ (ಕಿರಿಯ ಅಧಿಕಾರಿ ಶ್ರೇಣಿ) | 11 | ಅಂಗೀಕೃತ ವಿಶ್ವವಿದ್ಯಾಲಯದಿಂದ ಯಾವುದೇ ವಿಷಯದಲ್ಲಿ ಪದವಿ ಪಡೆದಿರಬೇಕು. ಕಂಪ್ಯೂಟರ್ ಪರಿಣಿತಿ ಕಡ್ಡಾಯ. ಬ್ಯಾಂಕಿಂಗ್ ಅಥವಾ ಸಹಕಾರ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸಿದ ಅನುಭವ ಹೊಂದಿದವರಿಗೆ ಆದ್ಯತೆ. ಸದರಿ ಹುದ್ದೆಗೆ ಗರಿಷ್ಠ ವಯೋಮಿತಿ 35 |

| | | | |
|---|---|---|---|
| | | | ವರ್ಷಗಳು |
| 6 | ಸಹಾಯಕರು | 8 | ಅಂಗೀಕೃತ ವಿಶ್ವವಿದ್ಯಾಲಯದಿಂದ ಯಾವುದೇ ವಿಷಯದಲ್ಲಿ ಪದವಿ ಪಡೆದಿರಬೇಕು. ಬಿ.ಕಾಂ/ಬಿ.ಬಿ.ಎಂ ಪದವಿಗೆ ಆದ್ಯತೆ ನೀಡಲಾಗುವುದು. ಕಂಪ್ಯೂಟರ್ ಪರಿಣಿತಿ ಕಡ್ಡಾಯ. ಸದರಿ ಹುದ್ದೆಗೆ ಗರಿಷ್ಠ ವಯೋಮಿತಿ 30 ವರ್ಷಗಳು. |
| 7 | ಟೈಪಿಸ್ಟ್ ಕಂ ಸ್ಟೆನೋ+ (ಸಹಾಯಕ ಶ್ರೇಣಿ) | 2 | ಅಂಗೀಕೃತ ವಿಶ್ವವಿದ್ಯಾಲಯದಿಂದ ಯಾವುದೇ ವಿಷಯದಲ್ಲಿ ಪದವಿ ಪಡೆದಿರಬೇಕು. ಕಂಪ್ಯೂಟರ್ ಪರಿಣಿತಿ ಕಡ್ಡಾಯ. ಶೀಘ್ರಲಿಪಿಯನ್ನು ಕನ್ನಡ ಮತ್ತು ಇಂಗ್ಲೀಷ್ ಭಾಷೆಯಲ್ಲಿ ಪ್ರೌಢದರ್ಜೆ (Senior) ಯಲ್ಲಿ ತೇರ್ಗಡೆಯಾಗಿರಬೇಕು ಮತ್ತು ಬೆರಳಚ್ಚಿನಲ್ಲಿ ಕನ್ನಡ ಹಾಗೂ ಇಂಗ್ಲೀಷ್ ಭಾಷೆಯಲ್ಲಿ ಪ್ರೌಢದರ್ಜೆ (Senior) ಯಲ್ಲಿ ತೇರ್ಗಡೆಯಾಗಿರಬೇಕು. ಸಂಬಂಧಿಸಿದ ಅಂಗೀಕೃತ ಪ್ರಾಧಿಕಾರದಿಂದ ಪ್ರಮಾಣಪತ್ರ ಪಡೆದಿರಬೇಕು. ಸದರಿ ಹುದ್ದೆಗೆ ಗರಿಷ್ಠ ವಯೋಮಿತಿ 30 ವರ್ಷಗಳು. |
| 8 | ಕಿರಿಯ ಸಹಾಯಕರು | 11 | ಪದವಿ ಪೂರ್ವ ಶಿಕ್ಷಣ ಮಂಡಳಿ ನಡೆಸುವ ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಕಂಪ್ಯೂಟರ್ ಪರಿಣಿತಿ ಕಡ್ಡಾಯ. ಸದರಿ ಹುದ್ದೆಗೆ ಗರಿಷ್ಠ ವಯೋಮಿತಿ 30 ವರ್ಷಗಳು. |
| 9 | ಉಪ ಸಿಬ್ಬಂದಿ ಕಮ್ ವಾಹನ ಚಾಲಕ | 2 | ಅಂಗೀಕೃತ ಪ್ರೌಢಶಾಲೆಯಿಂದ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಲಿ ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಮೋಟಾರ್ ವಾಹನ ಚಾಲನಾ ಪರವಾನಿಗೆ ಪಡೆದು ಮೂರು ವರ್ಷಗಳಾಗಿರತಕ್ಕದ್ದು. ಲಘುವಾಹನ ಚಾಲಕರಾಗಿ ಕನಿಷ್ಠ ಮೂರು ವರ್ಷಗಳ ಅನುಭವ ಹೊಂದಿರತಕ್ಕದ್ದು. ಸದರಿ ಹುದ್ದೆಗೆ ಗರಿಷ್ಠ ವಯೋಮಿತಿ 30 ವರ್ಷಗಳು |

**ಗಮನಕ್ಕಾಗಿ :**

1) ಈ ಮೇಲಿನ ಎಲ್ಲ ಹುದ್ದೆಗಳಿಗೆ ಕನ್ನಡ ಓದುವ, ಬರೆಯುವ ಮತ್ತು ಮಾತನಾಡುವ ಭಾಷ ಜ್ಞಾನ ಕಡ್ಡಾಯ.
2) **ಅರ್ಜಿ ಶುಲ್ಕ:** ಕ್ರಮ ಸಂಖ್ಯೆ 1 ರಿಂದ 5 ರ ವರೆಗಿನ ಹುದ್ದೆಗಳಿಗೆ ಅರ್ಜಿ ಶುಲ್ಕ – ರೂ.500/– ಕ್ರಮ ಸಂಖ್ಯೆ 6 ರಿಂದ 9 ರ ವರೆಗಿನ ಹುದ್ದೆಗಳಿಗೆ ಅರ್ಜಿ ಶುಲ್ಕ – ರೂ.300/– ತಾವು ಸಲ್ಲಿಸುತ್ತಿರುವ ಹುದ್ದೆಗೆ ಸಂಬಂಧಿಸಿದ ಅರ್ಜಿ ಶುಲ್ಕವನ್ನು **'ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., (Karnataka State Souharda Federal Cooperative Ltd.,)** ಈ ಹೆಸರಿನಲ್ಲಿ ಬೆಂಗಳೂರಿನಲ್ಲಿ ಸಂದಾಯವಾಗುವಂತೆ ಡಿ.ಡಿ. (ಡಿಮ್ಯಾಂಡ್ ಡ್ರಾಫ್ಟ್) ತೆಗೆದು, ಅರ್ಜಿಯ ಜೊತೆ ಲಗತ್ತಿಸಿ ಕಳುಹಿಸುವುದು
3) ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಂಬಂದಿಸಿದ ಹುದ್ದೆಗಳಿಗೆ ಸೂಚಿಸಿದ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಬೇಕು.
4) ಒಬ್ಬ ಅಭ್ಯರ್ಥಿಯು ಕೇವಲ ಒಂದು ಹುದ್ದೆಗೆ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.
5) ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯಲ್ಲಿ ಅಗತ್ಯವಿರುವ ಇರುವ ಈ ಮೇಲಿನ ಗುತ್ತಿಗೆ ಆಧಾರದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಂಬಂಧ ನೇಮಕಾತಿ ಪ್ರಕ್ರಿಯೆಯ ಪೂರ್ಣ ವಿವರ ಹಾಗೂ ನಿಗದಿತ ಅರ್ಜಿಗಳನ್ನು ಸಂಯುಕ್ತ ಸಹಕಾರಿಯ ಜಾಲ ತಾಣ website:www.souharda.coop ರಲ್ಲಿ ನೀಡಿದ್ದು, ಕೋರಿಯರ್/ರಿಜಿಸ್ಟರ್ಡ್ ಪೋಸ್ಟ್/ಖುದ್ದಾಗಿ ಕಛೇರಿಗೆ ತಲುಪಿಸುವ ಮೂಲಕ ಅರ್ಜಿ ಸಲ್ಲಿಸತಕ್ಕದ್ದು.
6) ಈ ಹಿಂದೆ ಅರ್ಜಿ ಸಲ್ಲಿಸಿರು ಅಭ್ಯರ್ಥಿಗಳು ಸಂಬಂಧಿಸಿದ ದಾಖಲೆಗಳು/ಡಿಡಿ ಸಲ್ಲಿಸದೆ ಇರುವವರಿಗೆ ಸಲ್ಲಿಸಲು ಅವಕಾಶವಿರುತ್ತದೆ.

# ನೇಮಕಾತಿ ಪ್ರಕ್ರಿಯೆಯ ವಿವರಗಳು

**1. ಅರ್ಜಿಸಲ್ಲಿಸುವ ವಿಧಾನ :**

1) ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯು ಕರ್ನಾಟಕ ರಾಜ್ಯ ಸೌಹಾರ್ದಸಂಯುಕ್ತ ಸಹಕಾರಿಯ ವೆಬ್‌ಸೈಟ್ (www.souharda.coop) ನಿಂದ ಡೌನ್‌ಲೋಡ್ ಮಾಡಿಕೊಂಡು, ಪೂರ್ತಿಯಾಗಿ ಭರ್ತಿ ಮಾಡಿ, ಈ ವಿಳಾಸಕ್ಕೆ **"ಸೌಹಾರ್ದ ಸಹಕಾರಿ ಸೌದ" #68, ಒಂದನೇ ಮಹಡಿ, 18ನೇ ಅಡ್ಡರಸ್ತೆ, ಮಾರ್ಗೋಸ ರಸ್ತೆ ಮಲ್ಲೇಶ್ವರಂ, ಬೆಂಗಳೂರು–560055**. ಇಲ್ಲಿಗೆ ತಲುಪುವಂತೆ ಅರ್ಜಿಗಳನ್ನು ದಿನಾಂಕ: 09.09.2024 ಸಂಜೆ 5.30ರ ರೊಳಗಾಗಿ ಕಳುಹಿಸತಕ್ಕದ್ದು.
2) ಅರ್ಜಿಯಲ್ಲಿ ನಮೂದಿಸುವ ಇ–ಮೇಲ್ ವಿಳಾಸ ಹಾಗೂ ಮೊಬೈಲ್ ಸಂಖ್ಯೆ(whatsApp)ಯನ್ನು, ನೇಮಕಾತಿ ಪ್ರಕ್ರಿಯೆಯ ಸಂವಹನಕ್ಕೆ ಪರಿಗಣಿಸಲಾಗುವುದು.
3) ಅಧಿಸೂಚನೆಯಲ್ಲಿ ನೀಡಿರುವ ಸೂಚನೆಗಳನ್ವಯವೇ ಅರ್ಜಿಯನ್ನು ಪೂರ್ತಿಯಾಗಿ ಭರ್ತಿ ಮಾಡತಕ್ಕದ್ದು. ಅಪೂರ್ಣ ಹಾಗೂ ತಪ್ಪು ಮಾಹಿತಿಗಳನ್ನೊಳಗೊಂಡ ಅಥವಾ ನಿಗದಿತ ಸಮಯದ ನಂತರ ತಲುಪಿದ ಅರ್ಜಿಗಳನ್ನು ಕಾರಣ ನೀಡದೆ ತಿರಸ್ಕರಿಸಲಾಗುವುದು.

**2. ಅರ್ಜಿಯ ಜೊತೆ ಸಲ್ಲಿಸಬೇಕಾದ ದಾಖಲಾತಿಗಳು :**

1) ಹುದ್ದೆಗೆ ನಿಗದಿಪಡಿಸಿದ ಅರ್ಜಿ ನಮೂನೆಯನ್ನು ಪೂರ್ಣವಾಗಿ ಭರ್ತಿ ಮಾಡಿರುವ ಅರ್ಜಿ
2) ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ರುಜುವಾತು ಪಡಿಸುವ ದಾಖಲಾತಿಗಳು.
   (ಎಲ್ಲಾ ವರ್ಷಗಳ/ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರಗಳ ಸ್ವಯಂ ದೃಢೀಕರಿಸಿದ ಪ್ರತಿಗಳನ್ನು ಲಗತ್ತಿಸಬೇಕು.)
3) ಸೇವೆಯಲ್ಲಿರುವ ಅಭ್ಯರ್ಥಿಗಳಿಂದ ತಾವು ಸೇವೆ ಸಲ್ಲಿಸುತ್ತಿರುವ ಪ್ರಾಧಿಕಾರ/ಸಂಸ್ಥೆಯಿಂದ ಅರ್ಜಿ ಸಲ್ಲಿಕೆಗೆ ಅನುಮತಿಪತ್ರ. (ಮಾದರಿ ನೀಡಲಾಗಿದೆ)
4) ಕಂಪ್ಯೂಟರ್ ಜ್ಞಾನವನ್ನು ಹೊಂದಿರುವ ಕುರಿತು ಸ್ವಯಂ ದೃಢೀಕರಿಸಿದ ದಾಖಲಾತಿ.

**3. ವಯೋಮಿತಿ:**

1) ಸನ್ನದು ಲೆಕ್ಕಪರಿಶೋಧಕರು(**(Charted Accountant)** : ಗರಿಷ್ಠ 35 ವರ್ಷಗಳು.
2) ಕಾನೂನು ಅಧಿಕಾರಿ/ಅಧಿಕಾರಿ : ಗರಿಷ್ಠ 35 ವರ್ಷಗಳು.
3) ಮಾನವ ಸಂಪನ್ಮೂಲ ಅಧಿಕಾರಿ(ಎಂಬಿಎ, ಹೆಚ್‌ಆರ್): ಗರಿಷ್ಠ 35 ವರ್ಷಗಳು.
4) ತರಬೇತಿ ಅಧಿಕಾರಿ : ಗರಿಷ್ಠ 35 ವರ್ಷಗಳು.
5) ಕಿರಿಯ ಅಧಿಕಾರಿ/ಸೌಹಾರ್ದ ಅಭಿವೃದ್ಧಿ ಅಧಿಕಾರಿ : ಗರಿಷ್ಠ 35 ವರ್ಷಗಳು.
6) ಸಹಾಯಕ : ಗರಿಷ್ಠ 30 ವರ್ಷಗಳು.
7) ಬೆರಳಚ್ಚುಗಾರರು (ಸ್ಟೆನೊಗ್ರಾಪರ್)(ಸಹಾಯಕ ಶ್ರೇಣಿ) : ಗರಿಷ್ಠ 30 ವರ್ಷಗಳು.
8) ಕಿರಿಯ ಸಹಾಯಕ : ಗರಿಷ್ಠ 30 ವರ್ಷಗಳು.
9) ಉಪಸಿಬ್ಬಂದಿ ಕಂ ವಾಹನಚಾಲಕ : ಗರಿಷ್ಠ 30 ವರ್ಷಗಳು.

**4. ಆಯ್ಕೆ ವಿಧಾನ :**

1) ಎಲ್ಲಾ ಹುದ್ದೆಗಳಿಗೂ ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಮೂಲಕ ಮಾಡಲಾಗುತ್ತದೆ.
2) ಬೆರಳಚ್ಚುಗಾರ/ಸ್ಟೇನೂಗ್ರಾಪರ್‌ಗೆ ಬೆರಳಚ್ಚು ಪರೀಕ್ಷೆ & ಉಪಸಿಬ್ಬಂದಿ ಕಂ ವಾಹನ ಚಾಲಕ ಸಿಬ್ಬಂದಿಗಳಿಗೆ ವಾಹನ ಚಾಲನಾ ಪ್ರಾಯೋಗಿಕ ಪರೀಕ್ಷೆ ಇರುತ್ತದೆ.
3) ಲಿಖಿತ ಹಾಗೂ ಸಂದರ್ಶನ/ಕೌಶಲ್ಯ ಪರೀಕ್ಷೆಗೆ ಕರೆಯಲ್ಪಟ್ಟ ಅಭ್ಯರ್ಥಿಗಳು ತಮ್ಮ ಸ್ವಂತ ವೆಚ್ಚದಲ್ಲಿ ಹಾಜರಾಗಬೇಕು. ಯಾವುದೇ ಪ್ರಯಾಣ ಭತ್ಯೆ/ದಿನ ಭತ್ಯೆಗಳನ್ನು ನೀಡಲಾಗುವುದಿಲ್ಲ.
4) ಎಲ್ಲಾ ಹುದ್ದೆಗಳಿಗೂ ಪರೀಕ್ಷಾ ಕೇಂದ್ರ ಬೆಂಗಳೂರು ಆಗಿರುತ್ತದೆ.

**5. ಸಾಮಾನ್ಯ ಸೇವಾ ಷರತ್ತುಗಳು:**

1) ಸಂಯುಕ್ತ ಸಹಕಾರಿಯ ಸೇವೆಗೆ ಆಯ್ಕೆಯಾದ ಅಭ್ಯರ್ಥಿಯು 11 ತಿಂಗಳುಗಳ ಎರಡು ಅವಧಿಯ ಗುತ್ತಿಗೆ ಸೇವಾ ಅವಧಿಯನ್ನು ಹೊಂದಿರುತ್ತಾರೆ. ಕ.ರಾ.ಸೌ. ಸಂಯುಕ್ತ ಸಹಕಾರಿಯ ಆಡಳಿತ ಮಂಡಳಿಯ ನಿರ್ಣಯಕ್ಕೆ ಒಳಪಟ್ಟು ಗುತ್ತಿಗೆ ಅವಧಿಯನ್ನು ಮುಂದುವರೆಸಬಹದು.
2) ಸಂಯುಕ್ತ ಸಹಕಾರಿಯ ಗುತ್ತಿಗೆ ಸೇವೆಗೆ ಆಯ್ಕೆಯಾದ ಅಭ್ಯರ್ಥಿಗೆ ಆಯಾ ಹುದ್ದೆಗಳಿಗನುಗುಣವಾಗಿ ಈ ಕೆಳಗಿನಂತೆ ಕ್ರೋಢೀಕೃತ ವೇತನ ಹಾಗೂ ಅನ್ವಯ ಭವಿಷ್ಯನಿಧಿ, ಇಎಸ್‌ಐ ಸೌಲಭ್ಯ ನೀಡಲಾಗುತ್ತದೆ.

| ಕ್ರ.ಸಂ | ಹುದ್ದೆಗಳ ಹೆಸರು | ಮೊದಲ ವರ್ಷ | ಎರಡನೇ ವರ್ಷ |
|---|---|---|---|
| 1 | ಸನ್ನದು ಲೆಕ್ಕಪರಿಶೋಧಕರು | 60,000/– | 70,000/– |
| 2 | ಕಾನೂನು ಅಧಿಕಾರಿಗಳು(ಅಧಿಕಾರಿ ಶ್ರೇಣಿ) | 35,000/– | 38,000/– |
| 3 | ಮಾನವ ಸಂಪನ್ಮೂಲ ಅಧಿಕಾರಿ(ಅಧಿಕಾರಿ ಶ್ರೇಣಿ) | 35,000/– | 38,000/– |
| 4 | ತರಬೇತಿ ಅಧಿಕಾರಿ(ಅಧಿಕಾರಿ ಶ್ರೇಣಿ) | 35,000/– | 38,000/– |
| 5 | ಸೌಹಾರ್ದ ಅಭಿವೃದ್ಧಿ ಅಧಿಕಾರಿ( ಕಿರಿಯ ಅಧಿಕಾರಿ ಶ್ರೇಣಿ) | 28,000/– | 30,000/– |
| 6 | ಸಹಾಯಕರು | 20,000/– | 22,000/– |
| 7 | ಟೈಪಿಸ್ಟ್ ಕಂ ಸ್ಟೆನೋ (ಸಹಾಯಕ ಶ್ರೇಣಿ) | 20,000/– | 22,000/– |
| 8 | ಕಿರಿಯ ಸಹಾಯಕರು | 13,000/– | 15,000/– |
| 9 | ಉಪಸಿಬ್ಬಂದಿ ಕಮ್ ವಾಹನ ಚಾಲಕ | 13,000/– | 15,000/– |

3) ವಿದ್ಯಾರ್ಹತೆ ಹಾಗೂ ಅನುಭವಕ್ಕೆ ಸಂಬಂಧಪಟ್ಟ ಮೂಲ ದಾಖಲಾತಿಗಳನ್ನು ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
4) ಸಂಯುಕ್ತ ಸಹಕಾರಿಯು ಯಾವುದೇ ಹುದ್ದೆಗೆ ಸಂಬಂಧಿಸಿದಂತೆ ಪ್ರತ್ಯೇಕ ಸೇವಾ ಷರತ್ತುಗಳನ್ನು ವಿಧಿಸಬಹುದಾಗಿದೆ.
5) ಆಯ್ಕೆಯಾದ ಅಭ್ಯರ್ಥಿಗಳು ಸಂಯುಕ್ತ ಸಹಕಾರಿಯ ಸೇವಾ ನಿಯಮಗಳಿಗೆ ಒಳಪಟ್ಟಿರುತ್ತಾರೆ.
6) ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿಯೂ ಯಾವುದೇ ಕಾರಣವನ್ನು ನೀಡದೆ ರದ್ದುಗೊಳಿಸುವ ಅಧಿಕಾರವನ್ನು ಸಂಯುಕ್ತ ಸಹಕಾರಿಯು ಹೊಂದಿರುತ್ತದೆ

**6. ಅರ್ಹತಾ ಷರತ್ತುಗಳು:**

1) ಭಾರತೀಯ ನಾಗರೀಕನಾಗಿರತಕ್ಕದ್ದು.
2) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕ ವಾಗಿ ಆರೋಗ್ಯವಂತನಾಗಿರತಕ್ಕದ್ದು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತನಾಗಿರತಕ್ಕದ್ದು.
3) ದೈಹಿಕವಾಗಿ ಅನರ್ಹರಾಗಿದ್ದಾನೆಂಬುದಾಗಿ ವೈದ್ಯಕೀಯ ಪರೀಕ್ಷೆಯಲ್ಲಿ ಕಂಡುಬಂದಲ್ಲಿ ನೇಮಕಾತಿಯನ್ನು ತಿರಸ್ಕರಿಸುವ ಪೂರ್ಣ ವಿವೇಚನಾಧಿಕಾರವನ್ನು ಸಂಯುಕ್ತ ಸಹಕಾರಿಯು ಕಾದಿರಿಸಿಕೊಂಡಿದೆ.

4) ಒಬ್ಬ ಅಭ್ಯರ್ಥಿಯು ನೈಜ ವ್ಯಕ್ತಿಯಾಗಿಲ್ಲವೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ/ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಸಂದರ್ಶನದಿಂದ/ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**ಸಹಿ/–**

**ವ್ಯವಸ್ಥಾಪಕ ನಿರ್ದೇಶಕ**

**ಪ್ರಸ್ತುತವಾಗಿ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರಿಗಳಿಂದ ಪಡೆಯಬೇಕಾದ ನಿರಾಕ್ಷೇಪಣಾ/ಅನುಮತಿ ಪತ್ರದ ನಮೂನೆ**

**ನಿರಾಕ್ಷೇಪಣಾ/ಅನುಮತಿ ಪತ್ರದ ನಮೂನೆ ಸಂಖ್ಯೆ:** **ದಿನಾಂಕ:**

ಶ್ರೀ/ಶ್ರೀಮತಿ ---------------------------------------------ತಂದೆ------------------------------------------ ಇವರು ದಿನಾಂಕ: ------------ ರಿಂದ ----------- ದಿನಾಂಕದವರೆಗೆ ------------------------------------------------------------------------------------------------------------ ಸಂಸ್ಥೆಯಲ್ಲಿ ----------------------- ಹುದ್ದೆಯಲ್ಲಿ ಖಾಯಂ/ ಹಂಗಾಮಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಸದರಿಯವರು ಕ.ರಾ.ಸೌ.ಸಂ.ಸ.ನಿ., ಇದರ ನೇಮಕಾತಿ ಅಧಿಸೂಚನೆಯಂತೆ ಆಹ್ವಾನಿಸಿರುವ ------------------ ಹುದ್ದೆಗೆ ಅರ್ಜಿ ಸಲ್ಲಿಸಲು ಯಾವುದೇ ಆಕ್ಷೇಪಣೆ ಇರುವುದಿಲ್ಲವೆಂದು ಈ ಮೂಲಕ ದೃಢೀಕರಿಸಿದೆ.

ಸಂಸ್ಥೆಯ ಮೊಹರು

ಪ್ರಾಧಿಕಾರಿಗಳ ಪದನಾಮ
ಮೊಹರು

ದಿನಾಂಕ :
ಸ್ಥಳ :